**All India Radio: Bangalore**
**National Bulletins In Kannada**
**19.07.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**19.07.2025 / 19.35 hrs**

**<><*<><>*><>**

ಮುಖ್ಯಾಂಶಗಳು

- ಉತ್ತರಾಖಂಡದಲ್ಲಿಂದು ಒಂದು ಸಾವಿರದ ೨೭೧ ಕೋಟಿ ಮೌಲ್ಯದ ವಿವಿಧ ಕಾಮಗಾರಿಗಳಿಗೆ ಕೇಂದ್ರ ಸಚಿವ ಅಮಿತ್ ಶಾ ಶಂಕುಸ್ಥಾಪನೆ

- ಮುಂದಿನ ವರ್ಷದ ವೇಳೆಗೆ ತೆಲಂಗಾಣದ ಕಾಝಿಪೇಟ್ ರೈಲು ಉತ್ಪಾದನಾ ಘಟಕ ಪ್ರಾರಂಭ

- ಸಂಸತ್ತಿನ ಮಳೆಗಾಲದ ಅಧಿವೇಶನ ಮುನ್ನ ನಾಳೆ ಸರ್ವಪಕ್ಷ  ಸಭೆ ಕರೆದ ಕೇಂದ್ರ ಸರ್ಕಾರ

- ವಾರಣಸಿಯಲ್ಲಿಂದು ಯುವ ಆಧ್ಯಾತ್ಮಿಕ ಶೃಂಗಸಭೆಗೆ ಚಾಲನೆ

**<><*<><>*><>**

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ಉತ್ತರಾಖಂಡದಲ್ಲಿಂದು ೧ ಸಾವಿರದ ೨೭೧ ಕೋಟಿ ರೂಪಾಯಿ ಮೌಲ್ಯದ ವಿವಿಧ ಕಾಮಗಾರಿಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ಉತ್ತರಾಖಂಡದ ರುದ್ರಪುರದಲ್ಲಿ ಆಯೋಜಿಸಲಾದ ಉತ್ತರಾಖಂಡ ಹೂಡಿಕೆ ಉತ್ಸವ - ೨೦೨೫ ರಲ್ಲಿ ಹೂಡಿಕೆದಾರರು ಮತ್ತು ಉದ್ಯಮಿಗಳೊಂದಿಗೆ ಸಂವಾದ ನಡೆಸಿದರು.  ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಉತ್ತರಾಖಂಡದಂತಹ ಸಣ್ಣ ರಾಜ್ಯಗಳು ಪ್ರಗತಿ ಸಾಧಿಸದ ಹೊರತು ದೇಶವು ಅಭಿವೃದ್ಧಿ ಹೊಂದಲು ಸಾಧ್ಯವಿಲ್ಲ. ಆದ್ದರಿಂದ ಕೇಂದ್ರ ಸರ್ಕಾರವು ಸಣ್ಣ ರಾಜ್ಯಗಳು ಮತ್ತು ಪೂರ್ವ ರಾಜ್ಯಗಳ ಅಭಿವೃದ್ಧಿಗೆ ವಿಶೇಷ ಗಮನ ಹರಿಸಿದೆ ಎಂದು ಹೇಳಿದರು.

**<><*<><>*><>**

ದೇಶದ ಹಿತಾಸಕ್ತಿಗಳನ್ನು ಪೂರೈಸಿದರೆ ಮಾತ್ರ ಭಾರತ ಅಂತಾರಾಷ್ಟ್ರೀಯ ವ್ಯಾಪಾರ ಒಪ್ಪಂದಗಳನ್ನು ಮಾಡಿಕೊಳ್ಳುತ್ತದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಪುನರುಚ್ಚರಿಸಿದ್ದಾರೆ. ವಿಕಸಿತ ಭಾರತದ ಕಡೆಗೆ ಜಾಗತಿಕ ಪ್ರಭಾವವನ್ನು ಸೃಷ್ಟಿಸುವ ಕುರಿತು ASSOCHAM ಆಯೋಜಿಸಿದ್ದ ಅಧಿವೇಶನ ಉದ್ದೇಶಿಸಿ ಮಾತನಾಡಿದ ಸಚಿವರು, ಭಾರತಕ್ಕೆ ಯಾವಾಗಲೂ ದೇಶದ ಹಿತಾಸಕ್ತಿಯೇ ಮೊದಲು ಎಂದು ಹೇಳಿದರು. ಸಣ್ಣ ಮತ್ತು ದೊಡ್ಡ ಸಂಸ್ಥೆಗಳ ನಡುವೆ ಸಾಮೂಹಿಕ ಬೆಳವಣಿಗೆ ಮತ್ತು ಪರಸ್ಪರ ಬೆಂಬಲದ ಕಡೆಗೆ ಬದಲಾವಣೆಗೆ ಸಚಿವರು ಕರೆ ನೀಡಿದರು. ಜಾಗತಿಕವಾಗಿ ಸ್ಪರ್ಧಿಸಲು ಸಂಶೋಧನೆ, ನಾವೀನ್ಯತೆ, ಗುಣಮಟ್ಟ ಮತ್ತು ಸ್ಕೇಲಿಂಗ್

ಮೇಲೆ ಕೇಂದ್ರೀಕರಿಸುವ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಮಹತ್ವವನ್ನು ಸಚಿವ ಪಿಯೂಷ್ ಗೋಯಲ್ ಒತ್ತಿ ಹೇಳಿದರು.

**ಧ್ವನಿ: ಪಿಯೂಷ್ ಗೋಯಲ್, ಕೇಂದ್ರ ಸಚಿವ ( ೨೬ ಸೆಕೆಂಡ್ಸ್)**

**<><*<><>*><>**

ತೆಲಂಗಾಣದ ಕಾಝಿಪೇಟ್‌ನಲ್ಲಿರುವ ರೈಲು ಉತ್ಪಾದನಾ ಘಟಕವು ಮುಂದಿನ ವರ್ಷದ ವೇಳೆಗೆ ಉತ್ಪಾದನೆ ಪ್ರಾರಂಭಿಸಲಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಕೇಂದ್ರ ಕಲ್ಲಿದ್ದಲು ಗಣಿ ಸಚಿವ ಜಿ.ಕಿಶನ್ ರೆಡ್ಡಿ ಅವರೊಂದಿಗೆ ಘಟಕದ ಪ್ರಗತಿಯನ್ನು ಪರಿಶೀಲಿಸಿದ ನಂತರ ಮಾತನಾಡಿದ ಅವರು, ಈ ವರ್ಷದ ಅಂತ್ಯದ ವೇಳೆಗೆ ಸಿವಿಲ್ ಕಾಮಗಾರಿಗಳು ಪೂರ್ಣಗೊಳ್ಳಲಿವೆ. ರೈಲು ಎಂಜಿನ್‌ಗಳು, ಕೋಚ್‌ಗಳು, ಬೋಗಿಗಳು ಮತ್ತು ಮೆಟ್ರೋ ರೈಲು ಕೋಚ್‌ಗಳನ್ನು ಹಂತ-ಹಂತವಾಗಿ ಈ ಘಟಕದಲ್ಲಿ ತಯಾರಿಸಬಹುದು. ಇದು ದೇಶದ ಅತಿ ದೊಡ್ಡ ರೈಲು ಉತ್ಪಾದನಾ ಘಟಕಗಳಲ್ಲಿ ಒಂದಾಗಿದೆ ಎಂದರು. ಭಾರತದ ರೈಲು ಮೂಲಸೌಕರ್ಯವನ್ನು ಬಲಪಡಿಸುವಲ್ಲಿ ಮತ್ತು ದೇಶದ ಆರ್ಥಿಕ ಪ್ರಗತಿಗೆ ಚಾಲನೆ ನೀಡುವಲ್ಲಿ ಕಾಝಿಪೇಟೆ ಘಟಕವು ನಿರ್ಣಾಯಕ ಪಾತ್ರ ವಹಿಸುತ್ತದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

**ಧ್ವನಿ: ಅಶ್ವಿನಿ ವೈಷ್ಣವ್ ( ೧೮ ಸೆಕೆಂಡ್ಸ್)**

**<><*<><>*><>**

ವಿಕಸಿತ ಭಾರತ ಗುರಿ ಸಾಕಾರಕ್ಕೆ ದೇಶದಲ್ಲಿ ತಂತ್ರಜ್ಞಾನ ಬುನಾದಿಯಾಗಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಎರಡು ದಿನಗಳ ತೆಲಂಗಾಣ ಪ್ರವಾಸದಲ್ಲಿರುವ ಅವರು, ಐಐಟಿ ಹೈದರಾಬಾದ್‌ನ ಘಟಿಕೋತ್ಸವದಲ್ಲಿಂದು ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು. ಈ ವೇಳೆ, ಭಾರತದ ತಂತ್ರಜ್ಞಾನ ಚಾಲಿತ ಭವಿಷ್ಯದ ಕುರಿತು ಪ್ರಸ್ತಾಪಿಸಿದ ಅವರು, ಜಾಗತಿಕ ಮಟ್ಟದ ತಂತ್ರಜ್ಞಾನ ಹಾಗೂ ಉತ್ಪನ್ನಗಳನ್ನು ವಿನ್ಯಾಸಗೊಳಿಸುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಆರು ಸೆಮಿಕಂಡಕ್ಟರ್ ಘಟಕಗಳು ಈಗಾಗಲೇ ನಿರ್ಮಾಣ ಹಂತದಲ್ಲಿದ್ದು, ದೇಶದ ಮೊದಲ ಸ್ಥಳೀಯ ಸೆಮಿಕಂಡಕ್ಟರ್ ಚಿಪ್ ಅನ್ನು ಇದೇ ವರ್ಷ ಬಿಡುಗಡೆ ಮಾಡಲಾಗುವುದು. ಆ ಮೂಲಕ ಭಾರತ ಈ ಕ್ಷೇತ್ರದಲ್ಲಿ ಮುಂಚೂಣಿ ಜಾಗತಿಕ ರಾಷ್ಟ್ರವಾಗಲಿದೆ ಎಂದು ಹೇಳಿದರು.

**<><*<><>*><>**

ಸಂಸತ್ತಿನ ಮಳೆಗಾಲದ ಅಧಿವೇಶನ ಬರುವ ಸೋಮವಾರದಿಂದ ಆರಂಭವಾಗಲಿದೆ. ಇದಕ್ಕೂ ಮುನ್ನ ಕೇಂದ್ರ ಸರ್ಕಾರ ನಾಳೆ ಸರ್ವಪಕ್ಷ ಸಭೆ ಕರೆದಿದೆ. ಈ ಸಭೆಯಲ್ಲಿ, ಸಂಸತ್ತಿನ ಎರಡೂ ಸದನಗಳ ಸುಗಮ ಕಾರ್ಯನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು, ಸರ್ಕಾರ ಎಲ್ಲಾ ರಾಜಕೀಯ ಪಕ್ಷಗಳಿಂದ ಸಹಕಾರ ಕೋರಲಿದೆ. ಇದೇ ೨೧ ರಿಂದ, ಮುಂದಿನ ತಿಂಗಳ ೨೧ ರವರೆಗೆ ಮಳೆಗಾಲದ ಅಧಿವೇಶನ ನಡೆಯಲಿದೆ. ಅಧಿವೇಶನದಲ್ಲಿ, ಹಲವಾರು ಪ್ರಮುಖ ಶಾಸನಗಳನ್ನು ಚರ್ಚೆ ಮತ್ತು ಅಂಗೀಕಾರಕ್ಕಾಗಿ ಕೈಗೆತ್ತಿಕೊಳ್ಳಲು ನಿರ್ಧರಿಸಲಾಗಿದೆ.

**<><*<><>*><>**

ಸಂಸತ್ತಿನ ಮಳೆಗಾಲದ ಅಧಿವೇಶನಕ್ಕೆ ಮುಂಚಿತವಾಗಿ ಐ.ಎನ್.ಡಿ.ಐ.ಎ ಘಟಬಂಧನದಲ್ಲಿ ಒಡಕು ಗೋಚರಿಸುತ್ತಿವೆ ಎಂದು ಬಿಜೆಪಿ ವಾಗ್ದಾಳಿ ನಡೆಸಿದೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ವಕ್ತಾರ ಸುಧಾಂಶು ತ್ರಿವೇದಿ, ಆಮ್ ಆದ್ಮಿ ಪಕ್ಷವು ಇನ್ನು ಮುಂದೆ ವಿರೋಧ ಪಕ್ಷದ ಮೈತ್ರಿಕೂಟದಲ್ಲಿಲ್ಲ ಎಂದು ಈಗಾಗಲೇ ಘೋಷಿಸಿದೆ ಎಂದು ಹೇಳಿದರು. ಜಾರಿ

ನಿರ್ದೇಶನಾಲಯವು ರಾಬರ್ಟ್ ವಾದ್ರಾ ವಿರುದ್ಧ ಆರೋಪಪಟ್ಟಿ ಸಲ್ಲಿಸಿರುವ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್ ಅನ್ನು ಸುಧಾಂಶು ತ್ರಿವೇದಿ ಟೀಕಿಸಿದರು. ಈ ಹೇಳಿಕೆಗಳನ್ನು ಅವರು ತಮ್ಮ ವೈಯಕ್ತಿಕ ಸಾಮರ್ಥ್ಯದಲ್ಲಿ ಮಾಡಿದ್ದಾರೆಯೇ ಅಥವಾ ವಿರೋಧ ಪಕ್ಷದ ನಾಯಕನಾಗಿ ಮಾಡಿದ್ದಾರೆಯೇ ಎಂದು ಪ್ರಶ್ನಿಸಿದರು. ತಮ್ಮ ಕುಟುಂಬವನ್ನು ಅವರ ತಪ್ಪುಗಳಿಂದ ರಕ್ಷಿಸಲು ರಾಹುಲ್ ಗಾಂಧಿ ಅವರು ತಮ್ಮ ವಿರೋಧ ಪಕ್ಷದ ನಾಯಕನ ಸ್ಥಾನವನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ಸುಧಾಂಶು ತ್ರಿವೇದಿ ಆರೋಪಿಸಿದರು. ಮುಂಬರುವ ಸಂಸತ್ತಿನ ಅಧಿವೇಶನವನ್ನು ಸಕಾರಾತ್ಮಕವಾಗಿ, ಪರಿಣಾಮಕಾರಿಯಾಗಿ ಮತ್ತು ರಚನಾತ್ಮಕವಾಗಿ ಬಳಸಿಕೊಳ್ಳುವಂತೆ ವಿರೋಧ ಪಕ್ಷಗಳನ್ನು ಅವರು ಒತ್ತಾಯಿಸಿದರು.

**<><*<><>*><>**

ಸ್ವಚ್ಛ ಸರ್ವೇಕ್ಷಣಾ ಅಭಿಯಾನದ ಹಿನ್ನೆಲೆಯಲ್ಲಿ ಆಕಾಶವಾಣಿ ಸುದ್ದಿ ವಿಭಾಗ ೧೫ ನಿಮಿಷದ ವಿಶೇಷ ಕಾರ್ಯಕ್ರಮವನ್ನು ಪ್ರಸ್ತುತಪಡಿಸುತ್ತಿದ್ದು, ಈ ಕಾರ್ಯಕ್ರಮ ಇಂದು ರಾತ್ರಿ ೯.೧೫ಕ್ಕೆ ಆಕಾಶವಾಣಿಯ ಮುಖ್ಯ ವಾಹಿನಿಯಲ್ಲಿ ಮೂಡಿಬರಲಿದೆ.

**<><*<><>*><>**

ವಾರಾಣಸಿಯಲ್ಲಿಂದು ಆಯೋಜಿಸಲಾಗಿದ್ದ ಯುವ ಆಧ್ಯಾತ್ಮಿಕ ಶೃಂಗಸಭೆಗೆ, ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಮನ್ಸೂಖ್ ಮಾಂಡವೀಯಾ ಚಾಲನೆ ನೀಡಿದರು. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ಸಚಿವ ಡಾ. ವೀರೇಂದ್ರ ಕುಮಾರ್, ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಉಪಸ್ಥಿತರಿದ್ದರು. ಅಧಿವೇಶನವನ್ನು ಉದ್ದೇಶಿಸಿ ಸಚಿವ ಮನ್ಸುಖ್ ಮಾಂಡವಿಯಾ, ೨೦೪೭ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಭಾರತದ ಗುರಿ, ಸಾಕಾರಗೊಳ್ಳಬೇಕಾದರೆ ಮಾದಕದ್ರವ್ಯ ಮುಕ್ತ ಯುವ ಸಮಾಜ ನಿರ್ಮಾಣ ಅಗತ್ಯ. ಮಾದಕದ್ರವ್ಯ ಮುಕ್ತ ಭಾರತ ಅಭಿಯಾನದಲ್ಲಿ ಎಲ್ಲಾ ನಾಗರಿಕರ ಕೊಡುಗೆ ಪ್ರಮುಖವಾಗಿದ್ದು, ಪ್ರತಿಯೊಬ್ಬ ನಾಗರಿಕರೂ ಕನಿಷ್ಠ ೫ ಯುವಜನರನ್ನು ಮಾದಕ ವ್ಯಸನದಿಂದ ಮುಕ್ತಗೊಳಿಸುವ ಪ್ರತಿಜ್ಞೆಯನ್ನು ಕೈಗೊಳ್ಳಬೇಕಿದೆ ಎಂದು ತಿಳಿಸಿದರು. ಶೃಂಗಸಭೆಯಲ್ಲಿ ಸಾಮಾಜಿಕ, ಸಾಂಸ್ಕೃತಿಕ ಹಾಗೂ ಆಧ್ಯಾತ್ಮಿಕ ಸಂಸ್ಥೆಗಳ ೫೦೦ಕ್ಕೂ ಹೆಚ್ಚು ಯುವ ಪ್ರತಿನಿಧಿಗಳು ಭಾಗವಹಿಸಿದ್ದು, ನಾಳೆ ಕಾಶಿ ಘೋಷಣೆಯ ಬಿಡುಗಡೆಯೊಂದಿಗೆ ಸಮಾಪನಗೊಳ್ಳಲಿದೆ.

**<><*<><>*><>**

ಕರ್ನಾಟಕದ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಯಾಗಿ ವಿಭು ಭಕ್ರು ಪ್ರಮಾಣ ವಚನ ಸ್ವೀಕರಿಸಿದರು. ಬೆಂಗಳೂರಿನ ರಾಜಭವನದಲ್ಲಿಂದು ನಡೆದ ಸಮಾರಂಭದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉಪಸ್ಥಿತರಿದ್ದರು. ಬಳಿಕ ಮಧ್ಯಾಹ್ನ ನಡೆದ ಸಮಾರಂಭದಲ್ಲಿ ಕರ್ನಾಟಕದ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾಗಿ ಜಯಂತ್ ಬ್ಯಾನರ್ಜಿ ಹಾಗೂ ದಿನೇಶ್ ಕುಮಾರ್ ಸಿಂಗ್ ಪ್ರಮಾಣವಚನ ಸ್ವೀಕರಿಸಿದರು. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಕಾನೂನು ಸಚಿವ ಎಚ್.ಕೆ.ಪಾಟೀಲ್, ಕಂದಾಯ ಸಚಿವ ಕೃಷ್ಣಭೈರೇಗೌಡ ಉಪಸ್ಥಿತರಿದ್ದರು.

**<><*<><>*><>**

೨೦೪೭ ರ ವೇಳೆಗೆ ಭಾರತವು ಅಭಿವೃದ್ಧಿ ಹೊಂದಿದ ದೇಶವಾಗುವ ಗುರಿಯನ್ನು ಹೊಂದಿದೆ. ಈ ಗುರಿ ಸಾಧಿಸುವಲ್ಲಿ ಪ್ರತಿಯೊಬ್ಬ ನಾಗರಿಕನ ಪಾತ್ರವೂ ಇದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ. ಕೇರಳದ ಐಐಟಿ ಪಾಲಕ್ಕಾಡ್‌ನ ೭ನೇ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸಾರಿಗೆ, ವಸತಿ, ವೈದ್ಯಕೀಯ ಸೌಲಭ್ಯಗಳು ಮತ್ತು ಕೃಷಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ವಿಶ್ವ ದರ್ಜೆಯ ಮೂಲಸೌಕರ್ಯವನ್ನು ನಿರ್ಮಿಸುವಲ್ಲಿ ವಿದ್ಯಾರ್ಥಿಗಳು ಮುಂಚೂಣಿಯಲ್ಲಿದ್ದಾರೆ ಎಂದರು. ದೇಶಾದ್ಯಂತ ಎಲ್ಲರನ್ನೂ ಒಳಗೊಂಡ ಮತ್ತು ನೈತಿಕ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯವನ್ನು ಕಲ್ಪಿಸಲಾಗಿದೆ ಎಂದು ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದರು.

**<><*<><>*><>**

ಇಂಡೋನೇಷ್ಯಾದ ಸೋಲೋದಲ್ಲಿ ಇಂದು ನಡೆದ ಬ್ಯಾಡ್ಮಿಂಟನ್ ಏಷ್ಯಾ ಜೂನಿಯರ್ ಮಿಶ್ರ ತಂಡ ಚಾಂಪಿಯನ್‌ಶಿಪ್‌ನ ಗ್ರೂಪ್ ಡಿ ಪಂದ್ಯದಲ್ಲಿ ಯುನೈಟೆಡ್ ಅರಬ್ ಎಮಿರೇಟ್ಸ್ ವಿರುದ್ಧ ೧೧೦-೮೩ ಅಂತರದಿಂದ ಭರ್ಜರಿ ಜಯ ಸಾಧಿಸುವ ಮೂಲಕ ಭಾರತ, ಕ್ವಾರ್ಟರ್ ಫೈನಲ್ ಪ್ರವೇಶಿಸಿದೆ. ಬಾಲಕಿಯರ ಸಿಂಗಲ್ಸ್‌ನಲ್ಲಿ, ರುಜುಲಾ ರಾಮು, ಮೈಶಾ ಖಾನ್ ಅವರನ್ನು ೧೧-೫ ಅಂತರದಿಂದ ಸೋಲಿಸುವ ಮೂಲಕ ಭಾರತ ಅಮೋಘ ಆರಂಭ ಪಡೆದುಕೊಂಡಿತು. ಮಿಶ್ರ ಡಬಲ್ಸ್‌ನಲ್ಲಿ ಸಿ ಲಾಲ್ರಾಮ್ಸಂಗ ಮತ್ತು ತಾರಿಣಿ ಸೂರಿ ಜೋಡಿ ಮುನ್ನಡೆ ಸಾಧಿಸಿತು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**